150(346) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಜೌರಾದ್): ಮಾನ್ಯ ಉಪ ಮುಖ್ಯಮಂತ್ರಿ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಹೈದ್ರಾಬಾದ್ ಕರ್ನಾಟಕದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಮತ್ತು ವಿಶೇಷವಾಗಿ ಅತ್ಯಂತ ಹಿಂದುಳಿದಿರುವ ಬೀದರ್ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ;

ಆ) ಇದಕ್ಕಾಗಿ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ;

ಇ) ಪ್ರಸಕ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಮೇಲ್ಕಂಡ ಇಲಾಖೆಯ ವತಿಯಿಂದ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು; (ವಿಧಾನ ಸಭಾ ಕ್ಷೇತ್ರವಾರು ಪೂರ್ಣ ವಿವರಗಳನ್ನು ಒದಗಿಸುವುದು)?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿ):

ಅ) ಮತ್ತು ಆ) ಗುಲ್ಬರ್ಗಾದಲ್ಲಿ ವಿಮಾನ ನಿಲ್ದಾಣ ಸ್ಥಾಪಿಸಲು ಶ್ರೀನಿವಾಸ ಸರಡಗಿ ಬಳಿ 567 ಎಕರೆ 10 ಗುಂಟೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ ಹಾಗೂ ಈ ವಿಮಾನ ನಿಲ್ದಾಣವನ್ನು ಭಾರತ ಸರ್ಕಾರದ ವಿಮಾನ ನಿಲ್ದಾಣ ಪ್ರಾಧಿಕಾರವು ನಿರ್ಮಿಸಿ ಕಾರ್ಯಚರಣೆಗೊಳಿಸಲು ಅನುವಾಗುವಂತೆ ರಾಜ್ಯ ಸರ್ಕಾರವು ಪ್ರಸ್ತಾವನೆಯೊಂದನ್ನು ಭಾರತ ಸರ್ಕಾರಕ್ಕೆ ಕಳುಹಿಸಿದ್ದು, ಇದಕ್ಕೆ ಕೇಂದ್ರ ಸರ್ಕಾರದ ಅನುಮೋದನೆಯನ್ನು ನಿರೀಕ್ಷಿಸಲಾಗುತ್ತಿದೆ. ಮತ್ತು ಬೀದರ್‌ನಲ್ಲಿ ಭಾರತೀಯ ವಾಯುಪಡೆಯ ನಿಯಂತ್ರಣ ಹಾಗೂ ವ್ಯವಸ್ಥೆಯಡಿಯಿರುವ ರಕ್ಷಣಾ ವಿಮಾನ ನಿಲ್ದಾಣವನ್ನು ನಾಗರೀಕ ವಿಮಾನಯಾನ ಹಾರಾಟಕ್ಕೆ ಅನುಮತಿ ನೀಡಬೇಕೆಂದು ರಕ್ಷಣ ಮಂತ್ರಾಲಯಕ್ಕೆ ಸರ್ಕಾರವು ದಿನಾಂಕ 24.12.2005ರ ಪತ್ರದಲ್ಲಿ ಕೋರಲಾಗಿದೆ.

ಇ) ಗುಲರ್ಗಾ–ಬೀದರ್ ರೈಲ್ವೆ ಮಾರ್ಗವು ಹಿಂದುಳಿದ ಆ ಭಾಗದ ಅಭಿವೃದ್ಧಿಗೆ ಬಹಳ ಮುಖ್ಯವಾದ ಯೋಜನೆಯಾಗಿದೆ. ಸೊಲ್ಲಾಪುರ ಮತ್ತು ಗುಲ್ಬರ್ಗಾ ಭಾಗಗಳಿಂದ ಹೈದರಾಬಾದಿಗೆ ರೈಲು ಸಂಪರ್ಕ ಒದಗಿಸಲು ಸಹಾಯಕವಾಗುವುದರಿಂದ, ಆ ಭಾಗದ ಜನರ ಬಹಳ ದಿನಗಳ ಕನಸು ನನಸಾಗುತ್ತದೆ. ಹಾಲಿ ಈ ಮಾರ್ಗದ ನಿರ್ಮಾಣ ಕಾಮಗಾರಿಯು ಬಹಳ ಮಂದಗತಿಯಿಂದ ಸಾಗುತ್ತಿದೆ. ಈ ಕಾರಣದಿಂದ ದಿನಾಂಕ 14.02.2006ರಂದು ಮಾನ್ಯ ಮುಖ್ಯಮಂತ್ರಿಯವರು ಮಾನ್ಯ ಕೇಂದ್ರ ರೈಲ್ವೆ ಸಚಿವರನ್ನು ದೆಹಲಿಯಲ್ಲಿ ಭೇಟಿ ಮಾಡಿ ರಾಜ್ಯದಲ್ಲಿನ ರೈಲ್ವೆ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸುವ ಬಗ್ಗೆ ಸುಧೀರ್ಘ ಚರ್ಚೆ ನಡೆಸಿ ಒಂದು ಮೆಮೊರ್ಯಾಂಡಮ್ ಅನ್ನು ನೀಡಿದ ಸಂದರ್ಭದಲ್ಲಿ ಈ ಯೋಜನೆಗೆ ಸಾಕಷ್ಟು ಅನುದಾನ ಒದಗಿಸುವಂತೆ ಕೋರಿರುತ್ತಾರೆ. ದಿನಾಂಕ 18.02.2006ರಂದು ಮಾನ್ಯ ಮುಖ್ಯಮಂತ್ರಿಯವರು ಪುನಃ ಮಾನ್ಯ ಕೇಂದ್ರ ರೈಲ್ವೆ ಸಚಿವರಿಗೆ ಅರೆ ಸರ್ಕಾರಿ ಪತ್ರ ಬರೆದು ಬೀದರ್–ಗುಲ್ಬರ್ಗಾ ಹೊಸ ರೈಲು ಮಾರ್ಗ ನಿರ್ಮಾಣ ಯೋಜನೆಯನ್ನು ವೆಚ್ಚ ಪಾಲುದಾರಿಕೆ ಆಧಾರದ ಮೇಲೆ ಕೈಗೊಳ್ಳಲು ಒಪ್ಪಿಕೊಂಡಿರುತ್ತಾರೆ. ಕೇಂದ್ರದ ಉತ್ತರ ನಿರೀಕ್ಷಿಸಲಾಗಿದೆ.